967 ಶ್ರೀ ವೀರಭದ್ರಪ್ಪ ಹಾಲಹರವಿ : ಮಾನ್ಯ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಎಲ್ಲಾ ವಾರ್ಡುಗಳಲ್ಲಿನ ಒಳಚರಂಡಿಯನ್ನು ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಇದ್ದಲ್ಲಿ ಇದಕ್ಕೆ ತಗಲುವ ವೆಚ್ಚ ಎಷ್ಟು?

ಇ) ಈ ಯೋಜನೆಯನ್ನು ಎಂದಿನಿಂದ ಕೈಗೆತ್ತಿಕೊಳ್ಳಲಾಗುವುದು ಇಲ್ಲವಾದರೆ ಕಾರಣಗಳೇನು?

ಶ್ರೀ ಎಸ್.ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಎ.ಡಿ.ಬಿ.ನೆರವಿನ ಉತ್ತರ ಕರ್ನಾಟಕ ನಗರ ವಲಯ ಬಂಡವಾಳ ಹೂಡಿಕಾ ಕಾರ್ಯಕ್ರಮದಡಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಕೆಲವು ವಾರ್ಡ್‌ಗಳಲ್ಲಿ ಒಳಚರಂಡಿಯನ್ನು ಅಭಿವೃದ್ಧಿ ಪಡಿಸುವ ಯೋಜನೆಯನ್ನು ಸರ್ಕಾರವು ಹಮ್ಮಿಕೊಂಡಿದೆ.

ಆ) ಒಟ್ಟು ಅಂದಾಜು ರೂ.800 ಕೋಟಿ ರೂಪಾಯಿಗಳು ಅವಶ್ಯಕತೆ ಇದ್ದು, ಉತ್ತರಕರ್ನಾಟಕ ನಗರ ವಲಯ ಬಂಡವಾಳ ಹೂಡಿಕೆ ಕಾರ್ಯಕ್ರಮದಲ್ಲಿ ಲಭ್ಯವಿರುವ ಅನುದಾನ ರೂ.144.03 ಕೋಟಿಗಳ ಯೋಜನೆಯನ್ನು ಸಿದ್ದಪಡಿಸಲಾಗುತ್ತಿದೆ ಇದರ ಅಡಿಯಲ್ಲಿ ಹುಬ್ಬಳ್ಳಿಯಲ್ಲಿ ರೂ.100.20 ಕೋಟಿಗಳ ಮತ್ತು ಧಾರವಾಡದಲ್ಲಿ ರೂ.43.83 ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು. ಅದರಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತದೆ.

ಇ) ಹುಬ್ಬಳ್ಳಿಯ ಒಳಚರಂಡಿ ಯೋಜನೆಗೆ 2009ರ ಪ್ರಸಕ್ತ ಸಾಲಿನಲ್ಲಿ ಟೆಂಡರ್ ಕರೆಯಲಾಗುವುದು. ಧಾರವಾಡ ನಗರದಲ್ಲಿ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದ್ದು, ಇದಾದ ನಂತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

967 Sri. Veerabhadrappa Halaharavi : Hon'ble Minister for Urban Development, Law and Parliamentary Affairs kindly answer to the below question?

a) Is there any project before the Government to takeup under ground drainage system for all the wards in Hubli Dharwad City Corporation?

b) What is the estimated cost?

c) When will the project commence, if not, why?

Sri S. Suresh Kumar (Minister for Urban Development Law and Parliamentary Affairs) :

a) Under ADB Assisted North Karnataka Urban Sector Investment Programme (NKUSIP) Underground sewerage work in some wards of Hubli-Dharwad Corporation limit has been taken up.

b) The total requirement for implementing the underground drainage for the entire Hubli-Dharwad town is Rs.800 Crores. Depending on the availability of funds under the ADB funded NKUSIP, a Detailed Project Report for Rs.144.03 Crores has been prepared Rs.100.20 Crores for Hubli and Rs.43.03 Crores for Dharwad.

c) The Process of inviting tenders would begin in 2009 for Providing underground sewerage system at Hubli. In Dharwad the process of selection of suitable land for Sewage Treatment Plant is in progress and civil work will commence only after land acquisition. This would be taken up in the next tranche.

974 ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು) : ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕು, ಹುಣಸೂರು ಪಟ್ಟಣದ ಒಳ ಚರಂಡಿಯ ಸಮಗ್ರ ಅಭಿವೃದ್ಧಿಗಾಗಿ ಪ್ರಸ್ತಾವನೆಯು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಬಂದಿರುವುದೇ;

ಆ) ಹಾಗಿದ್ದಲ್ಲಿ, ಪ್ರಸ್ತಾವನೆಯು ಯಾವ ಹಂತದಲ್ಲಿದೆ;

ಇ) ಈ ಯೋಜನೆಗಳನ್ನು ಎಷ್ಟು ಕಾಲಮಿತಿಯೊಳಗೆ ಕೈಗೆತ್ತಿಕೊಳ್ಳ ಲಾಗುವುದು?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯಹಾರಗಳ ಸಚಿವರು) :

ಅ) ಬಂದಿದೆ.

ಆ) ಹುಣಸೂರು ಪಟ್ಟಣಕ್ಕೆ ಸಮಗ್ರ ಒಳಚರಂಡಿ ಯೋಜನೆ ಸಿದ್ಧ ಪಡಿಸಲು ಭೌಗೋಳಿಕ ಸಮೀಕ್ಷೆ ಕಾರ್ಯಕ್ಕಾಗಿ (Topographic survey)